# ಕಲ್ಯಾಣ ಕಾಮಗಾರಿಗೆ ಕೊಡುಗೆ

## ಕಲ್ಯಾಣ ಕರ್ನಾಟಕದಲ್ಲಿ 3000 ಕೋಟಿ ವೆಚ್ಚದ ಯೋಜನೆಗಳಿಗೆ ಚಾಲನೆ

ಕಲಬುರಗಿ: ಕಲಬುರಗಿ ಮತ್ತು ಬೀದರ ಜಿಲ್ಲೆಗಳಲ್ಲಿ 3000 ಕೋಟಿ ವೆಚ್ಚದಲ್ಲಿ ಕೃಷಿ ಮತ್ತು ಕುಡಿಯುವ ನೀರಿನ ಯೋಜನೆ ಅನುಷ್ಠಾನಕ್ಕಾಗಿ ಕಾಗಿಣಾ ನದಿಗೆ ಹೊಂದಿಕೊಂಡು 10 ಏತ ನೀರಾವರಿ ಯೋಜನೆ ಕಾಮಗಾರಿ ಕೈಗೊಳ್ಳಲು ಅನುಮೋದನೆ ನೀಡಲಾಗಿದ್ದು ಈ ಯೋಜನೆ ಸಾಕಾರಗೊಂಡಲ್ಲಿ ರೈತರ ಲಕ್ಷಾಂತರ ಎಕರೆ ಭೂಮಿಗೆ ನೀರು ಹಾಗೂ ಕುಡಿಯುವ ನೀರಿನ ಸಮಸ್ಯೆ ನಿವಾರಣೆಯಾಗಲಿದೆ ಎಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.

ಕಲಬುರಗಿ ನಗರದ ಜಿಲ್ಲಾ ಪೊಲೀಸ್ ಪರೇಡ್ ಮೈದಾನದಲ್ಲಿ ಜಿಲ್ಲಾಡಳಿತ ಹಾಗೂ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಸಮಿತಿಯಿಂದ ಗುರುವಾರ ಆಯೋಜಿಸಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ರಾಷ್ಟ್ರಧ್ವಜಾರೋಹಣ ನೆರವೇರಿಸಿ ವಿವಿಧ ತುಕಡಿಗಳ ಪರಿವೀಕ್ಷಣೆ ಕೈಗೊಂಡು ಗೌರವ ವಂದನೆ ಸ್ವೀಕರಿಸಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಪ್ರಾಂತ್ಯದ ಅಭಿವೃದ್ಧಿಗೆ ಹೊಸ ಆಯಾಮ ನೀಡುವುದು ರಾಜ್ಯ ಸರ್ಕಾರದ ಪ್ರಮುಖ ಗುರಿ. ಹೀಗಾಗಿ ಕಲ್ಯಾಣ ಕರ್ನಾಟಕ ಉತ್ಸವದಂದು 1,115 ಕೋಟಿ ರೂ. ಗಳ ಬೃಹತ್ ಮೊತ್ತದ ಕಾಮಗಾರಿಗಳ ಶಿಲಾನ್ಯಾಸ ಮತ್ತು ಉದ್ಘಾಟನೆ ಮಾಡಲಾಗಿದೆ ಎಂದರು.

ದೇಶಕ್ಕೆ 1947, ಆ.15ರಂದು ಸ್ವಾತಂತ್ರ್ಯ ಸಿಕ್ಕಿದ್ದರೂ ಕಲ್ಯಾಣ ಕರ್ನಾಟಕ ಪ್ರದೇಶ ಮಾತ್ರ ಸ್ವಾತಂತ್ರ್ಯದಿಂದ ಮರೀಚಿಕೆಯಾಗಿತ್ತು. ಸರ್ದಾರ ವಲ್ಲಭಭಾಯಿ ಪಟೇಲರ ಅಚಲ ನಿರ್ಧಾರದಿಂದ ಹೈದರಾಬಾದ್ ಕರ್ನಾಟಕ ಪ್ರದೇಶ 1948 ಸೆ.17ರಂದು ಭಾರತ ಒಕ್ಕೂಟ ವ್ಯವಸ್ಥೆಯಲ್ಲಿ ... ಪ್ರದೇಶವನ್ನು ಮುಕ್ತಗೊ... ನಡೆಯಿತು. ... ಎಲ್ಲಾ ಮಹನೀಯರನ್ನು ಈ ಸಂದರ್ಭದಲ್ಲಿ ಸ್ಮರಿಸಿ ಗೌರವ ಸಮರ್ಪಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಬಿಜೆಪಿ ಸರ್ಕಾರ ಅಸ್ತಿತ್ವಕ್ಕೆ ಬಂದ ಕೂಡಲೆ ಕಳೆದ ವರ್ಷ ಇದೇ ದಿನ ಹೈದರಾಬಾದ್-ಕರ್ನಾಟಕ ಪ್ರದೇಶವನ್ನು ಕಲ್ಯಾಣ ಕರ್ನಾಟಕ ಎಂದು ಮರು ನಾಮಕರಣ ಮಾಡಿ ಇಲ್ಲಿನ ಬಹುಜನರ ಒತ್ತಾಸೆಯನ್ನು ಈಡೇರಿಸಲಾಗಿದೆ. ಪ್ರಾದೇಶಿಕ ಅಸಮತೋಲನ ನಿವಾರಿಸುವ ಉದ್ದೇಶದಿಂದ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಸ್ಥಾಪನೆಗೊಂಡಿದೆ. ಇದಲ್ಲದೆ ಈ ಪ್ರದೇಶದ ವ್ಯಾಪ್ತಿಯಲ್ಲಿ ಕೃಷಿ, ಶಿಕ್ಷಣ, ಸಾಹಿತ್ಯ, ಸ್ವಯಂ ಉದ್ಯೋಗ, ಆರೋಗ್ಯ, ಯುವಜನ ಮತ್ತು ಮಹಿಳಾ ಸಬಲೀಕರಣ, ಗ್ರಾಮ ಸಬಲೀಕರಣ ಹೀಗೆ ನಾನಾ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಲೆಂದೇ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕೃತಿಕ ಸಂಘದ ಕಚೇರಿ ಸ್ಥಾಪಿಸಲಾಗಿದೆ. ಸಂಘದ

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸರ್ದಾರ ವಲ್ಲಭಭಾಯಿ ಪಟೇಲರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾತನಾಡಿದರು. ಡಿಸಿಎಂ ಗೋವಿಂದ ಕಾರಜೋಳ, ಸಂಸದ ಡಾ.ಉಮೇಶ್ ಜಾಧವ್ ಹಾಗೂ ಇತರರಿದ್ದರು.



### ... ಆಸ್ಪತ್ರೆಗೆ ಅಡಿಗಲ್ಲು

... ರೋಗ ಸಂಸ್ಥೆ ಕಲಬುರಗಿ ಶಾಖೆಯ ... ಕಲಬುರಗಿ ನಗರಕ್ಕೆ 24/7 ... ನೀರು ಸರಬರಾಜು ಕಾಮಗಾರಿ, ... ವಿವಿಧ ಗ್ರಾಮಗಳಲ್ಲಿ ಏತ ... ಸ್ಥಾನ, ಶ್ರೀ ... ಅಭಿವೃದ್ಧಿ ಕಾಮಗಾರಿ, ...

### ಅಭಿವೃದ್ಧಿಗೆ ಒತ್ತು: ಕಾರಜೋಳ

ಬಡವರು, ಗುಳೆ ಹೋಗುವವರು ಕಲ್ಯಾಣ ಕರ್ನಾಟಕದಲ್ಲಿಯೇ ಹೆಚ್ಚಿದ್ದು ಹೀಗಾಗಿ ಈ ಪ್ರದೇಶ ಅಭಿವೃದ್ಧಿಗೆ ನಮ್ಮ ಸರ್ಕಾರ ವಿಶೇಷ ಒತ್ತು ನೀಡುತ್ತಿದೆ ಎಂದು ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಹೇಳಿದರು. ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯಲ್ಲಿ ಮಾತನಾಡಿದ ಅವರು, ಸಮಾಜ ಕಲ್ಯಾಣ ಇಲಾಖೆಯಿಂದ ಈ ಭಾಗದಲ್ಲಿ 30 ಕೋಟಿ ವೆಚ್ಚದಲ್ಲಿ ವಸತಿ ನಿಲಯ ಮತ್ತು ವಸತಿ ಶಾಲೆಗಳನ್ನು ... ಪೂರ್ಣಗೊಂಡಿವೆ. ಎಸ್‌ಸಿ, ಎಸ್‌ಟಿ ಜನಾಂಗದ ... ಶಿಕ್ಷಣಕ್ಕೆ ರಾಜ... 32 ... ವಸತಿ ಶಾಲೆ, 3009 ವಸತಿ ನಿಲಯಗಳಿದ್ದು ಸುಮಾರು 4 ಲಕ್ಷಕ್ಕಿಂತ ಹೆಚ್ಚಿನ ಮಕ್ಕಳು ಇಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂದರು.

ಚಟುವಟಿಕೆ ತೀವ್ರಗೊಳಿಸಲು 300 ಕೋಟಿ ರೂ. ಅನುದಾನ ಬಿಡುಗಡೆಗೆ ಅನುಮೋದನೆ ನೀಡಿ ಈಗಾಗಲೇ 100 ಕೋಟಿ ರೂ. ಬಿಡುಗಡೆ ಮಾಡಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳ ಮಾಹಿತಿಯುಳ್ಳ ಕೈಪಿಡಿ ಬಿಡುಗಡೆ ಮಾಡಲಾಯಿತು. ಸ್ವಾತಂತ್ರ್ಯ ಹೋರಾಟಗಾರರಾದ ವೆಂಕಟರಾವ ಅರ್ಜುನರಾವ್ ಶಿಂಧೆ, ಶಿವಲಿಂಗಪ್ಪ ಬಸಲಿಂಗಪ್ಪ ಪಾಟೀಲ್, ಭೀಮರಾವ ರೇವಣಸಿದ್ದಪ್ಪ ಕೊಟ್ಟರಗಿ, ವಿಜಯಕುಮಾರ ಪ್ರಭಾಕರ್ ತಡಕಲ್ ಹಾಗೂ ಶಂಕರೆಪ್ಪ ರಾಮಶೆಟ್ಟಪ್ಪ ಹುಗ್ಗಿ ಅವರನ್ನು ಮುಖ್ಯಮಂತ್ರಿಗಳು ಸನ್ಮಾನಿಸಿದರು.